ಇಲಾಖೆ / ವಿಷಯ: DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ    ದಿನಾಂಕ : DATE : 08/07/2019

# ಮಾಜಿ ಶಾಸಕ ಶಿವಲಿಂಗೇಗೌಡ ಅಂತ್ಯಕ್ರಿಯೆ

ಕ.ಪ್ರ 8/7/19

ಕನಕಪುರ: ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಶನಿವಾರ ನಿಧನರಾಗಿದ್ದ ಸಾತನೂರು ಕ್ಷೇತ್ರದ ಮಾಜಿ ಶಾಸಕ ಕೆ.ಎಲ್.ಶಿವಲಿಂಗೇಗೌಡ(93) ಅವರ ಅಂತಿಮ ಸಂಸ್ಕಾರ ಅವರ ಸ್ವಗ್ರಾಮವಾದ ರಾಮನಗರದ ಜಿಲ್ಲೆ ಕನಕಪುರ ತಾಲೂಕಿನ ಕಾಡಹಳ್ಳಿಯಲ್ಲಿ ಭಾನುವಾರ ನೆರವೇರಿತು. ಪಾರ್ಥಿವ ಶರೀರವನ್ನು ಸ್ವಗ್ರಾಮ ಕಾಡಹಳ್ಳಿಗೆ ಸಾಗಿಸುಹಾಗ ಆರ್‌ಇಎಸ್ ಸಂಸ್ಥೆಯಲ್ಲಿ ಸಾರ್ವಜನಿಕರ ದರ್ಶನಕ್ಕೆ ಇಡಲಾಗಿತ್ತು. ತಹಸೀಲ್ದಾರ್ ಆನಂದಯ್ಯ, ಶಿವಗಿರಿ ಕ್ಷೇತ್ರದ ಅನ್ನದಾನೇಶ್ವರಸ್ವಾಮಿ, ವಿಧಾನ ಪರಿಷತ್ ಸದಸ್ಯ ಎಸ್.ರವಿ, ಮಾಜಿ ಸಚಿವ ಪಿ.ಜಿ.ಆರ್. ಸಿಂಧ್ಯಾ ಮೃತರ ಅಂತಿಮ ದರ್ಶನ ಪಡೆದರು. ನಂತರ ಸ್ವಗ್ರಾಮ ಕಾಡಹಳ್ಳಿಯಲ್ಲಿ ಪುತ್ರ ಸುಧಾಕರ್ ಅವರು ಚಿತೆಗೆ ಅಗ್ನಿ ಸ್ಪರ್ಶ ಮಾಡುವ ಮೂಲಕ ಅಂತ್ರಕ್ರಿಯೆ ನೆರವೇರಿಸಿದರು.